## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ

## ಸಿ.ಸಿ ನಂಃ357/2014

| | | | |
|---|---|---|---|
| **ಚಾಸಾ ಃ** | **7** | **ಪ್ರಾಸಾಃ-** | **5** |

| | |
|---|---|
| ಹೆಸರು | ಜ್ಞಾನೇಶ್ |
| ತಂದೆಯ ಹೆಸರು | ಬಾಲಾಜಿ ದಾಸ್ |
| ವಯಸ್ಸು | 43 |
| ಉದ್ಯೋಗ | ಚಾಲಕ |
| ವಿಳಾಸ | ಹಾರೋಹಳ್ಳಿ |

- - - - - - - - - - - - - - - - - - - - - - - - - - - - -

**ದಿಃ20.11.2023ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ಆರೋಪಿತರ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಜಪ್ತಿಪಡಿಸಿಲ್ಲ. ನನಗೆ ಈಗ ತೋರಿಸಿದ ಒಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿಪಿ-13 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-13(ಬಿ) ಎಂದು ಗುರುತಿಸಲಾಯಿತು.

ನಿಪಿ-13 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.04.10.2013 ರಂದು ಬೆಳಿಗ್ಗೆ 9ಃ30 ರಿಂದ 10ಃ15 ಗಂಟೆ ಸಮಯದಲ್ಲಿ ಹಾರೋಹಳ್ಳಿ ಪೊಲೀಸ್ ಠಾಣೆ ಆವರಣದಲ್ಲಿ ನಮ್ಮ ಸಮಕ್ಷಮ ಪೋಲೀಸರು ನಿಪಿ-13 ರಂತೆ ಪಂಚನಾಮ ಕ್ರಮ ಜರುಗಿಸಿ ವಾಹನ ಮತ್ತು ಕಟ್ಟರ್ ಮಿಷನ್ ಗಳನ್ನು ಅಮಾನತ್ತುಪಡಿಸಿಕೊಂಡು ಪಂಚನಾಮೆ ಮಾಡಿ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**